**All India Radio: Bangalore**
**Regional Bulletin In Kannada**
**19.01.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.01.2025 / 6.40 p.m.**

**<><><><>**

ಮುಖ್ಯಾಂಶಗಳು

1. ದೇಶದ ಮತದಾನ ಪ್ರಕ್ರಿಯೆ ಆಧುನೀಕರಿಸಿದ ಚುನಾವಣಾ ಆಯೋಗದ ಕಾರ್ಯ ಶ್ಲಾಘನೀಯ - ಪ್ರಧಾನಿ ನರೇಂದ್ರ ಮೋದಿ
2. ಧಾರವಾಡದಲ್ಲಿ ದಿವ್ಯಾಂಗರಿಗೆ, ಹಿರಿಯ ನಾಗರೀಕರಿಗೆ ಉಚಿತ ಸಲಕರಣೆ ವಿತರಿಸಿದ ಕೇಂದ್ರ ಸಚಿವ ಬನ್ವರಿ ಲಾಲ್ ವರ್ಮಾ
3. ಫೆಬ್ರವರಿ ೧೦ ರಿಂದ ೧೨ ರವರೆಗೆ ಟಿ.ನರಸೀಪುರದಲ್ಲಿ ಕುಂಭಮೇಳ; ಭಕ್ತರಿಗೆ ಮೂಲಭೂತ ಸೌಕರ್ಯ ಕಲ್ಪಿಸುವಂತೆ ಸಚಿವ ಎಚ್.ಸಿ.ಮಹದೇವಪ್ಪ ಸೂಚನೆ
4. ಮುಡಾ ಹಗರಣ; ಸಿಬಿಐ ತನಿಖೆಗೆ ನೀಡುವಂತೆ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಆಗ್ರಹ

<><><><>

ಭಾರತ ಪ್ರಜಾಪ್ರಭುತ್ವದ ತಾಯಿಯಾಗಿದ್ದು, ಪ್ರಜಾಪ್ರಭುತ್ವದಲ್ಲಿ ಜನರ ಭಾಗವಹಿಸುವಿಕೆಗೆ ಬಹು ದೊಡ್ಡ ಸ್ಥಾನ ನೀಡಲಾಗಿದೆ ಎಂದು ತಮ್ಮ ೧೧೮ನೇ ಆವೃತ್ತಿಯ ಮನ್ ಕಿ ಬಾತ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ತಂತ್ರಜ್ಞಾನ ಬಳಕೆಯೊಂದಿಗೆ ನ್ಯಾಯಯುತ ಚುನಾವಣೆಗಳನ್ನು ನಡೆಸುತ್ತಿರುವ ಭಾರತದ ಚುನಾವಣಾ ಆಯೋಗವನ್ನು ಅವರು ಅಭಿನಂದಿಸಿದ್ದಾರೆ. ಇದೇ ವೇಳೆ, ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದ ಬಗ್ಗೆ ಮಾತನಾಡಿದ ಅವರು, ಯಾವುದೇ ರೀತಿಯ ತಾರತಮ್ಯ ಇಲ್ಲದೇ ವಿವಿಧ ಜಾತಿಗಳ ಜನರು ಹಾಗೂ ಪ್ರದೇಶಗಳ ಜನರು ಕುಂಭಮೇಳದಲ್ಲಿ ಒಗ್ಗೂಡಿದ್ದಾರೆ. ಇಲ್ಲಿ ಬಡವ, ಶ್ರೀಮಂತ ಎಂಬ ಜಾತಿಯ ಭೇದಬಾವವಿಲ್ಲ. ಈ ಭಾರಿ ಬಹಳಷ್ಟು ಜನರು ಇದಕ್ಕೆ ಸಾಕ್ಷಿಯಾಗಿರುವುದು ಹೆಮ್ಮೆಯ ಸಂಗತಿಗಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಪ್ರಧಾನಿ**

ಇದೇ ವೇಳೆ, ಐಐಟಿ ಮದ್ರಾಸ್‌ನಲ್ಲಿರುವ ಎಕ್ಸ್‌ಟೆಮ್ ಕೇಂದ್ರವು ಬಾಹ್ಯಾಕಾಶ ಉತ್ಪಾದನೆಗಾಗಿ ಹೊಸ ತಂತ್ರಜ್ಞಾನಗಳನ್ನು ಅನ್ವೇಷಿಸುತ್ತಿದೆ. ಅಲ್ಲದೇ, ಬಾಹ್ಯಾಕಾಶದಲ್ಲಿ ಆಪ್ಟಿಕಲ್ ಫೈಬರ್‌ಗಳಂತಹ ತಂತ್ರಜ್ಞಾನಗಳ ಬಗ್ಗೆ ಸಂಶೋಧನೆ ನಡೆಸುತ್ತಿದೆ. ನೀರಿಲ್ಲದೇ ಕಾಂಕ್ರಿಟ್ ತಯಾರಿಸುವಂತಹ ವಿಧಾನಗಳನ್ನು ಅಭಿವೃದ್ಧಿಪಡಿಸುತ್ತಿದೆ ಎಂದು ತಿಳಿಸಿದರು.

**ಧ್ವನಿ: ಪ್ರಧಾನಿ**

ಎಕ್ಸ್‌ಟೆಮ್‌ನ ಈ ಸಂಶೋಧನೆಯು ಭಾರತದ ಗಗನಯಾನ ಮಿಷನ್ ಮತ್ತು ಭವಿಷ್ಯದ ಬಾಹ್ಯಾಕಾಶ ನಿಲ್ದಾಣವನ್ನು ಇನ್ನಷ್ಟು ಬಲಪಡಿಸಲಿದೆ ಎಂದು ಪ್ರಧಾನಿ ಮೋದಿ ಪ್ರತಿಪಾದಿಸಿದ್ದಾರೆ. ಭಾರತದ ನವೋದ್ಯಮಕ್ಕೆ ೯ ವರ್ಷ ಪೂರ್ಣಗೊಂಡಿದ್ದು, ಸಣ್ಣ ನಗರಗಳ ನವೋದ್ಯಮಗಳ ಪೈಕಿ ಅರ್ಧಕ್ಕಿಂತ ಹೆಚ್ಚು ನವೋದ್ಯಮಗಳ ನೇತೃತ್ವವನ್ನು ಹೆಣ್ಣುಮಕ್ಕಳು ವಹಿಸಿದ್ದಾರೆ ಎಂದು ಪ್ರಧಾನಿ ಮೋದಿ ಸಂತಸ ವ್ಯಕ್ತಪಡಿಸಿದ್ದಾರೆ.

<><><><>

ದಿವ್ಯಾಂಗರ ಸ್ವಾಲಂಬಿ ಜೀವನಕ್ಕೆ ಅಗತ್ಯವಿರುವ ಎಲ್ಲ ಸಹಕಾರ, ಸೌಲಭ್ಯಗಳನ್ನು ಕೇಂದ್ರ ಸರಕಾರ ನೀಡುತ್ತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವಾಲಯದ ರಾಜ್ಯ ಸಚಿವ ಬನ್ವರಿ ಲಾಲ್ ವರ್ಮಾ ತಿಳಿಸಿದ್ದಾರೆ. ಕೇಂದ್ರ ಸರಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಿಂದ ವಿಶೇಷಚೇತನರಿಗೆ ನೆರವು ಯೋಜನೆಯಡಿಯಲ್ಲಿ ೧ ಸಾವಿರದ ೫೧ ದಿವ್ಯಾಂಗರಿಗೆ ಮತ್ತು ರಾಷ್ಟ್ರೀಯ ವಯೋಶ್ರೀ ಯೋಜನೆಯಡಿಯಲ್ಲಿ ೫೭೬ ಹಿರಿಯ ನಾಗರಿಕರಿಗೆ ಉಚಿತ ಸಾಧನ, ಸಲಕರಣೆಗಳನ್ನು ಧಾರವಾಡದಲ್ಲಿ ಅವರು ವಿತರಿಸಿದರು.

**ಧ್ವನಿ: ಬನ್ವರಿ ಲಾಲ್**

ಇದೇ ವೇಳೆ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮಾತನಾಡಿ, ಧಾರವಾಡ ಜಿಲ್ಲಾಡಳಿತದ ಸಹಯೋಗದಲ್ಲಿ ದಿವ್ಯಾಂಗರಿಗೆ ಹಾಗೂ ಹಿರಿಯ ನಾಗರಿಕರಿಗೆ ಹಲವಾರು ತಪಾಸಣಾ ಶಿಬಿರಗಳನ್ನು ಆಯೋಜಿಸಿ, ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.

**ಧ್ವನಿ: ಸಚಿವ ಪ್ರಲ್ಹಾದ ಜೋಶಿ**

<><><><>

ಮೈಸೂರಿನ ಟಿ ನರಸೀಪುರದ ತ್ರಿವೇಣಿ ಸಂಗಮದಲ್ಲಿ ಫೆಬ್ರವರಿ ೧೦ರಿಂದ ೧೨ ರವರೆಗೆ ಕುಂಭಮೇಳ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ

ತಿಳಿಸಿದ್ದಾರೆ. ಕುಂಭ ಮೇಳ -೨೦೨೫ರ ಸಂಬಂಧ ಮೈಸೂರಿನಲ್ಲಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಭಕ್ತರಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕುಂಭಮೇಳದಲ್ಲಿ ಸ್ವಚ್ಛತೆ ಕಾಪಾಡಬೇಕು, ಜೊತೆಗೆ ಪ್ಲಾಸ್ಟಿಕ್ ಮುಕ್ತ ಪ್ರದೇಶ ಎಂದು ಘೋಷಣೆ ಮಾಡಬೇಕು. ಮೊಬೈಲ್ ಟಾಯ್ಲೆಟ್ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ ನೀಡಿದ್ದಾರೆ. ಕೆ.ಎಸ್.ಆರ್.ಟಿ. ಸಿ ವತಿಯಿಂದ ವಿವಿಧ ಭಾಗಗಳಿಂದ ಹೆಚ್ಚಿನ ಬಸ್ ಗಳ ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದ್ದಾರೆ. ಕಾವೇರಿ ಆರತಿಯನ್ನು ಫೆಬ್ರವರಿ ೧೧ ರಂದು ನಡೆಸಲು ನಿರ್ಧರಿಸಲಾಗಿದೆ. ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತ ರೆಡ್ಡಿ ಮಾತನಾಡಿ, ನದಿಯಲ್ಲಿ ಸ್ನಾನ ಮಾಡಲು ೫ ಕಡೆ ಜಾಗ ಗುರುತಿಸಲಾಗಿದೆ. ೧ ಯಾಗ ಶಾಲೆ ನಿರ್ಮಾಣ ಮಾಡಲಾಗುವುದು. ೬ ಕುಟೀರಗಳನ್ನು ನಿರ್ಮಾಣ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><><><>

ಮುಡಾ ಹಗರಣವನ್ನು ಸಿಬಿಐ ತನಿಖೆಗೆ ಒಪ್ಪಿಸುವಂತೆ ಮಾಜಿ ಮುಖ್ಯಮಂತ್ರಿ, ಸಂಸದ ಜಗದೀಶ್ ಶೆಟ್ಟರ್ ಆಗ್ರಹಿಸಿದ್ದಾರೆ. ಸಿಬಿಐನಿಂದ ಮಾತ್ರ ಪಾರದರ್ಶಕ ತನಿಖೆ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿನ ಭಿನ್ನಾಭಿಪ್ರಾಯದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವ ಪರಿಸ್ಥಿತಿ ಎದುರಾಗಲಿದೆ ಎಂದು ಅವರು ತಿಳಿಸಿದ್ದಾರೆ. ಜಾತಿ ಗಣತಿ ಮಾಡುವ ಅಧಿಕಾರ ಕೇಂದ್ರ ಸರ್ಕಾರಕ್ಕೆ ಮಾತ್ರವಿದೆ ಹೊರತು ರಾಜ್ಯ ಸರ್ಕಾರಕ್ಕೆ ಇಲ್ಲ ಎಂದು ಅವರು ತಿಳಿಸಿದ್ದಾರೆ.

<><><><>

ಬೆಂಗಳೂರಿನಲ್ಲಿ ತೆರೆಯಲಾಗಿರುವ ವಿಜ್ಞಾನ ಆಧಾರಿತ ಮನೋರಂಜನಾ ವೇದಿಕೆ ಮ್ಯಾಡ್ ಲ್ಯಾಬ್ಸ್ ಅನ್ನು ಭಾರತೀಯ ವಿಜ್ಞಾನ ಸಂಸ್ಥೆಯ ಮಾಜಿ ನಿರ್ದೇಶಕ ಪ್ರೊಫೆಸರ್ ಪಿ. ಬಲರಾಮ್ ಮತ್ತು ಇಸ್ರೋ ಮಾಜಿ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತ ಡಾ.ಎ.ಎಸ್.ಕಿರಣ್ ಕುಮಾರ್ ಉದ್ಘಾಟಿಸಿದರು. ಇದೇ ವೇಳೆ, ವಿಜ್ಞಾನ, ಗಣಿತ, ಖಗೋಳಶಾಸ್ತ್ರ, ಭೌತಶಾಸ್ತ್ರ ಮತ್ತಿತರ ವೈಜ್ಞಾನಿಕ ಮನೋರಂಜನಾ ಚಟುವಟಿಕೆಗಳನ್ನು ವೀಕ್ಷಿಸಿದರು. ಡಾ.ಎ.ಎಸ್.ಕಿರಣ್ ಕುಮಾರ್ ಮಾತನಾಡಿ, ಚಿಕ್ಕ ಮಕ್ಕಳಲ್ಲಿ ಉತ್ಸಾಹ ಹೆಚ್ಚಿಸಲು ಪ್ರಯೋಗದ ಮೂಲಕ ಕಲಿಕೆಯನ್ನು ಉತ್ತೇಜಿಸುವ ವಿಶಿಷ್ಟ ವೇದಿಕೆ ಇದು ಎಂದು ತಿಳಿಸಿದರು.

<><><><>

ಬಮೂಲ್ ಸಂಸ್ಥೆಯ ಆಡಳಿತವಾಧಿ ಮುಗಿದು ಒಂದು ವರ್ಷ ಕಳೆದರೂ ಈವರೆಗೆ ಕಾಂಗ್ರೆಸ್ ಸರ್ಕಾರ ಚುನಾವಣೆ ನಡೆಸಿಲ್ಲ ಎಂದು  ಸಂಸದ ಡಾ.ಕೆ ಸುಧಾಕರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶೀಘ್ರವೇ ಸಹಕಾರಿ ಸಂಘಗಳು ಮತ್ತು ಸ್ಥಳೀಯ ಸಂಸ್ಥೆಯ ಚುನಾವಣೆಗಳನ್ನ ನಡೆಸಲು ಸರ್ಕಾರ ಕ್ರಮ ಕೈಗೊಳ್ಳಬೇಕಿದೆ ಎಂದು ಹೇಳಿದ್ದಾರೆ.

<><><><>

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗಿರುವ ಹಿನ್ನೆಲೆಯಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಉಷ್ಣಾಂಶ ಗಣನೀಯ ಕುಸಿತವಾಗಿದ್ದು, ತುಂತುರು ಮಳೆ ಸುರಿಯುತ್ತಿದೆ. ಹವಾಮಾನ ಇಲಾಖೆ ವರದಿಯ ಪ್ರಕಾರ ದಕ್ಷಿಣ ಕನ್ನಡ, ಕೊಡಗು, ಮೈಸೂರು, ಚಾಮರಾಜನಗರ, ರಾಮನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ಚಿಕ್ಕಮಗಳೂರು, ಕೋಲಾರ ಮತ್ತು ಹಾಸನ ಜಿಲ್ಲೆಗಳಲ್ಲಿ ಒಣಹವೆ ಮುಂದುವರೆದಿದ್ದು, ಒಂದೆರಡು ಕಡೆಗಳಲ್ಲಿ ಸಣ್ಣ ಪ್ರಮಾಣದಲ್ಲಿ ಮಳೆಯಾಗುವ ಸಾಧ್ಯತೆಗಳಿವೆ. ಮುಂದಿನ ಐದು ದಿನ ರಾಜ್ಯಾದ್ಯಂತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆಯ ಇಲಾಖೆ ಮುನ್ಸೂಚನೆ ನೀಡಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಜಲಾಶಯದ ಆವರಣದಲ್ಲಿ ನಾಳೆ ಬೆಳಗಾವಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ಮಿನಿ ತಾರಾಲಯಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ.
2. ಹುಬ್ಬಳ್ಳಿಯಲ್ಲಿ ಶ್ರೀ ಮಹಾಯೋಗಿ ವೇಮನ ಜಯಂತಿಯನ್ನು ಆಚರಿಸಲಾಯಿತು.  ಇದೇ ವೇಳೆ ಶ್ರೀ ಮಹಾಯೋಗಿ ವೇಮನ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.
3. ಜನರ ಏಳ್ಗೆಯನ್ನೇ ಮುಖ್ಯ ಗುರಿಯಾಗಿಸಿಕೊಂಡು, ಅಧ್ಯಾತ್ಮಿಕ ಚಿಂತನೆಗಳ ಮೂಲಕ ಸಮಾಜ ಸುಧಾರಣೆಗಾಗಿ ಶ್ರಮಿಸಿದ ಮಹನಿಯರಲ್ಲಿ ಶ್ರೀ ಮಹಾಯೋಗಿ ವೇಮನರು ಸಹ ಪ್ರಮುಖರಾಗಿದ್ದಾರೆ ಎಂದು  ರಾಯಚೂರು ತಹಸೀಲ್ದಾರ್ ಸುರೇಶ ವರ್ಮಾ ಹೇಳಿದ್ದಾರೆ.

4. ವಿಜಯನಗರ ಜಿಲ್ಲೆಯಲ್ಲಿ ಇದೇ ೨೧ ರಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಹಬ್ಬ ಆಚರಣೆ ನಿಮಿತ್ತ ಸಿರಿಧಾನ್ಯ ನಡಿಗೆ ಹಮ್ಮಿಕೊಳ್ಳಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಬಿ.ಶರಣಪ್ಪ ಮುದಗಲ್ ತಿಳಿಸಿದ್ದಾರೆ.

5. ಹೊಸಪೇಟೆ ತಾಲೂಕಿನ ಕಮಲಾಪುರ ಪುರಸಭೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕವನ್ನು ಸಮರ್ಪಕವಾಗಿ ವಸೂಲಾತಿ ಮಾಡಲು ಅರ್ಹ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಮುಖ್ಯಾಧಿಕಾರಿ ಹೆಚ್.ಮಹಾಂತೇಶ್ ಬಿಳಿಗಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>